ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 1380/2021**

**ಪಿಡಬ್ಲ್ಯೂ-3**
**ಸಿಡಬ್ಲ್ಯೂ-1**

**ಸಾಕ್ಷಿಗೆ ದಿನಾಂಕ 21-03-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

ಸಾಕ್ಷಿಯ ಹೆಸರು : ಪ್ರಮೀಳಾ. ಎಸ್

ಗಂಡನ ಹೆಸರು : ನಟರಾಜ. ವಿ.

ವಯಸ್ಸು : 43 ವರ್ಷ

ಉದ್ಯೋಗ : ಅಬಕಾರಿ ನಿರೀಕ್ಷಕರು, ಹಾಸನ ಅಬಕಾರಿ ಉಪ ಆಯಕ್ತರ ಕಛೇರಿ

ವಾಸಸ್ಥಳ : ಹಾಸನ

**ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ**

ನಾನು ದಿನಾಂಕ 24-07-2019 ರಿಂದ 24-07-2023 ರವರೆಗೆ ನಾನು ಹೊಸದುರ್ಗ ಅಬಕಾರಿ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 25-05-2021 ರಂದು ಬೆಳಗ್ಗೆ ಸುಮಾರು 10-20 ಗಂಟೆಗೆ ಸಿಬ್ಬಂದಿಯೊಂದಿಗೆ ಸರ್ಕಾರಿ ವಾಹನ ನಂಃ ಕೆಎ-16-ಜಿ-0799 ರಲ್ಲಿ ಹೊಸದುರ್ಗ ತ್ಲಾಲೂಕಿನ ಗಿರಿಯಾಪುರ ಗ್ರಾಮದಲ್ಲಿ ಗಸ್ತು ಕಾರ್ಯ ಮಾಡುತ್ತಿರುವಾಗ ಮತ್ತೋಡು ಹೋಬಳಿ ಲಕ್ಷ್ಮೀದೇವರಹಳ್ಳಿ ಗ್ರಾಮದ ನಾಗಭೂಷಣ್ ಬಿನ್ ಲೇಟ್.ರಾಮಪ್ಪ ಎಂಬುವರು ತನ್ನ ವಾಸದ ಮನೆಯಲ್ಲಿ ಅಕ್ರಮವಾಗಿ ಮದ್ಯ ಶೇಖರಣೆ ಮಾಡಿಕೊಂಡು ಮಾರಾಟ ಮಾಡುತ್ತಿದ್ದಾರೆ ಎಂದು ಬಂದ ಖಚಿತ ಮಾಹಿತಿ ಮೇರೆಗೆ ಲಕ್ಷ್ಮೀದೇವರಹಳ್ಳಿ ಗ್ರಾಮಕ್ಕೆ ಹೋಗುವ ತಿರುವಿನಲ್ಲಿ ನಿಂತಿದ್ದ ಪಂಚರಾದ ಚಾಸಾ-2 ಮತ್ತು 3 ರವರನ್ನು ಬರಮಾಡಿಕೊಂಡು ಅವರಿಗೆ ವಿಷಯ ತಿಳಿಸಿ ದಾಳಿ ಸಮಯದಲ್ಲಿ ಪಂಚರಾಗಿ ಸಹಕರಿಸುವಂತೆ ಕೋರಿ ಅವರಿಗೆ ನೋಟೀಸು ನೀಡಿದ್ದು ಅವರು ಒಪ್ಪಿರುತ್ತಾರೆ. ನಂತರ ಅವರನ್ನು ನಮ್ಮ ಸರ್ಕಾರಿ ವಾಹನದಲ್ಲಿ ಕರೆದುಕೊಂಡು ಮಾಹಿತಿ ಬಂದ ಗ್ರಾಮದ ಮನೆಯ ಹತ್ತಿರ ವಾಹನವನ್ನು ನಿಲ್ಲಿಸಿದಾಗ ಸಮವಸ್ತ್ರದಲ್ಲಿ ಇದ್ದ ನಮ್ಮನ್ನು ಕಂಡು ಸದರಿ ವ್ಯಕ್ತಿ ಓಡಿಹೋದರು. ಹಿಡಿಯಲು ಪ್ರಯತ್ನಿಸಿದರು ಸಿಗಲಿಲ್ಲ. ಮನೆಯ ಮುಂಭಾಗ ಒಬ್ಬ ಮಹಿಳೆ ನಿಂತದ್ದ ಆಕೆಯ

ಹೆಸರು ವಿಳಾಸ ಕೇಳಲಾಗಿ ಕವಿತಾ ಕೋಂ ನಾಗಭೂಷಣ್ ಎಂದು ತಿಳಿಸಿದರು. ಸದರಿ ಮನೆ ನಾಗಭೂಷಣ್ ರವರದ್ದು ಎಂದು ಆಕೆಯಿಂದ ಖಚಿತಪಡಿಸಿಕೊಂಡೆವು. ಓಡಿಹೋದ ವ್ಯಕ್ತಿ ತನ್ನ ಗಂಡ ನಾಗಭೂಷಣ್ ಎಂದು ತಿಳಿಸಿದರು. ನಂತರ ಸದರಿ ವ್ಯಕ್ತಿಗೆ ಬಂದ ಮಾಹಿತಿ ತಿಳಿಸಿ ಅಬಕಾರಿ ಕಾಯ್ದೆ ಕಲಂ 54 ರಡಿಯಲ್ಲಿ ಸ್ಥಳದಲ್ಲಿ ಶೋಧನಾ ಸಮುಚಿತ ಆಧಾರ ತಯಾರಿಸಿ ಪಂಚರ ಸಮಕ್ಷಮ ಪರಸ್ಪರ ಅಂಗಶೋಧನೆ ಮಾಡಿಕೊಂಡು ಮನೆಯನ್ನು ಶೋಧನೆ ಮಾಡಲಾಗಿ, ಅಡುಗೆ ಮನೆಯ ಒಂದು ಮೂಲೆಯಲ್ಲಿ ಒಂದು ಬಿಳಿ ಬಣ್ಣದ ಚೀಲ ಇರುವುದು ಕಂಡುಬಂತು. ಸದರಿ ಚೀಲವನ್ನು ಬಿಚ್ಚಿ ನೋಡಲಾಗಿ 180 ಎಂ ಎಲ್ ನ 3 ಓಲ್ಡ್ ಟವರಿನ್ ವಿಸ್ಕಿ ಟೆಟ್ರಾ ಪ್ಯಾಕುಗಳು, 90 ಎಂ ಎಲ್ ನ 47 ರಾಜಾ ವಿಸ್ಕಿಯ ಟೆಟ್ರಾ ಪ್ಯಾಕುಗಳು, ಕಂಡು ಬಂದಿದ್ದು ಇದರಲ್ಲಿ ಒಟ್ಟು 4.770 ಲೀಟರ್ ಮದ್ಯ ಇರುವುದು ಕಂಡುಬಂದಿರುತ್ತದೆ. ಅದಕ್ಕೆ ಸಂಬಂಧಿಸಿದ ದಾಖಲೆಗಳು ಇದೆಯೇ ಎಂದು ಕೇಳಲಾಗಿ, ಆಕೆ ಇರುವುದಿಲ್ಲ ಎಂದು ನುಡಿದರು. ನಂತರ ಸದರಿ ಕೃತ್ಯವು ಅಬಕಾರಿ ಕಾಯ್ದೆ ಅಡಿ ಶಿಕ್ಷಾರ್ಹ ಅಪರಾಧ ಎಂದು ಪಂಚರಾಗಿ ತಿಳಿಸಿ ದೊರೆತ ಸ್ವತ್ತುಗಳ ಪೈಕಿ ಎಲ್ಲಾ 180 ಎಂ ಎಲ್ ನ 3 ಓಲ್ಡ್ ಟವರಿನ್ ವಿಸ್ಕಿ ಟೆಟ್ರಾ ಪ್ಯಾಕುಗಳು, 90 ಎಂ ಎಲ್ ನ 24 ರಾಜಾ ವಿಸ್ಕಿಯ ಟೆಟ್ರಾ ಪ್ಯಾಕುಗಳು, ರಾಸಾಯನಿಕ ವಿಶ್ಲೇಷಣೆಗಾಗಿ ಪ್ರತ್ಯೇಕವಾಗಿ ಮಾದರಿಗೆ ತೆಗೆದು ಬಿಳಿಯ ಚೀಲದಿಂದ ಸುತ್ತಿ ದಾರದಿಂದ ಕಟ್ಟಿ ಅರಗು ಸೀಲು ಕೆ.ಎಸ್.ಇ-181 ಕ್ರಮ ಜರುಗಿಸಲಾಯಿತು. ಸದರಿ ಮಹಜರ್ ಕ್ರಮವನ್ನು ಬೆಳಗ್ಗೆ 10-50 ರಿಂದ 11-50 ರವರೆಗೆ ಪಂಚರ ಸಮಕ್ಷಮ ಜರುಗಿಸಲಾಯಿತು. ಸ್ಥಳದಲ್ಲಿ ಮಾದರಿ ಬಾಟಲಿನ ಚೀಟಿಯನ್ನು ತಯಾರಿಸಲಾಯಿತು. ಮಾದರಿ ಸೀಲಿನ ನಕಲನ್ನು ತಯಾರಿಸಲಾಯಿತು. ದೊರೆತ ಸ್ವತ್ತುಗಳ ಅನುಬಂಧ ತಯಾರಿಸಲಾಯಿತು. ಸ್ವತ್ತುಗಳ ಪಟ್ಟಿಯನ್ನು ಸಹ ತಯಾರಿಸಲಾಯಿತು. ಸದರಿ ದಾಖಲೆಗಳಿಗೆ ಚಾ.ಸಾ-2 ರಿಂದ 5 ರವರ ಸಹಿಗಳನ್ನು ಪಡೆಯಲಾಯಿತು. ವಶಪಡಿಸಿಕೊಂಡ ಮುದ್ದೆ ಮಾಲನ್ನು ಕಛೇರಿಗೆ ತಂದು ಹಾಜರುಪಡಿಸಿ ಪ್ರ.ವ.ವರದಿಯನ್ನು ತಯಾರಿಸಲಾಯಿತು. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾ.ಸಾ-7 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಸಾಕ್ಷಿಯು ಕತ್ಯ ಸ್ಥಳ ಮತ್ತು ಅಮಾನತ್ತು ಮಹಜರ್ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಅನುಬಂಧವನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು**

**ಗುರುತಿಸಲಾಯಿತು. ಸಾಕ್ಷಿಯು ಮಾದರಿ ಬಾಟಲಿನ ಚೀಟಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-5 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಮಾದರಿ ಸೀಲಿನ ನಕಲನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-6 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-6(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಶೋಧನಾ ಸಮುಚಿತ ಆಧಾರವನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-8 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-8(ಬಿ) ಎಂದು ಗುರುತಿಸಲಾಯಿತು. ಚಾ.ಸಾ-2 ರವರಿಗೆ ನೀಡಿದ ನೋಟೀಸನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು ನಿಪಿ-9 ಎಂದು, ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಚಾ.ಸಾ-3 ರವರಿಗೆ ನೀಡಿದ ನೋಟೀಸನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು ನಿಪಿ-10 ಎಂದು, ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಸಾಕ್ಷಿಯ ವಶಕ್ಕೆ ಪಡೆದ ಸ್ವತ್ತು ಪಟ್ಟಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-11 ಎಂದು, ಸಾಕ್ಷಿ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ವಯಂ ಪಿರ್ಯಾದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-12 ಎಂದು, ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-13 ಎಂದು, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು.**

ಆ ದಿನ ದಾಳಿ ಸಮಯದಲ್ಲಿ ಹಾಜರಿದ್ದು ನಮ್ಮನ್ನು ನೋಡಿ ಓಡಿ ಹೋದ ವ್ಯಕ್ತಿಯನ್ನು ನೋಡಿದರೆ ಗುರುತಿಸುತ್ತೇನೆ. ಸದರಿ ವ್ಯಕ್ತಿ ಈ ದಿನ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ .

**ಸಾಕ್ಷಿ ರಾಸಾಯನಿಕ ಪರೀಕ್ಷೆಗೆ ಮಾದರಿಗೆ ತೆಗೆದ ಟೆಟ್ರಾ ಪ್ಯಾಕ್ ಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ಮು.ಮಾ-1 ಮತ್ತು 2 ಎಂದು ಗುರುತಿಸಲಾಗಿದೆ.**

<u>ಪಾಟೀ ಸವಾಲು ಆರೋಪಿ ಪರ ಶ್ರೀ ಎಸ್.ಎಂ. ವಕೀಲರಿಂದಃ</u>

ದಿಃ 25-05-2021 ರಂದು ನಾವು ಯಾವುದೇ ಅಬಕಾರಿ ದಾಳಿ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಾವು ಆರೋಪಿಗೆ ಸೇರಿದ ಮನೆಯ ಮೇಲೆ ದಾಳಿ ಮಾಡಿರುತ್ತೇವೆ

ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಆರೋಪಿ ಅಕ್ರಮವಾಗಿ ಮದ್ಯವನ್ನು ಸಂಗ್ರಹಣೆ ಮಾಡಿರುತ್ತಾನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಸದರಿ ಚೀಲದಲ್ಲಿ ರಾಜಾ ವಿಸ್ಕಿಯ ಟೆಟ್ರಾ ಪ್ಯಾಕ್ ಗಳು ಮತ್ತು ಓ.ಟಿ ಟೆಟ್ರಾ ಪ್ಯಾಕ್ ಗಳು ಇದ್ದವು ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಚಾಸಾ-2 ಮತ್ತು 3 ರವರನ್ನು ಪಂಚರನ್ನಾಗಿ ನೇಮಿಸಿಕೊಂಡಿರುವುದಿಲ್ಲ ಮತ್ತು ಅವರನ್ನು ದಾಳಿಗೆ ಕರೆದುಕೊಂಡು ಹೋಗಿರುವುದಿಲ್ಲ ಎಂದರೆ ಸರಿಯಲ್ಲ. ಆ ದಿನ ಆರೋಪಿ ಕೃತ್ಯ ಸ್ಥಳದಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ನಾವು ಶೋಧನಾ ವಾರೆಂಟ್ ತಯಾರು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ದಾಳಿ ಮಾಡಿ ಮದ್ಯ ವಶಪಡಿಸಿಕೊಂಡೆವು ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಚಾ.ಸಾ-2 ಮತ್ತು 3 ರವರಿಗೆ ಯಾವುದೇ ನೋಟೀಸು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ರಾಸಾಯನಿಕ ಪರೀಕ್ಷೆಗಾಗಿ ಮಾದರಿಗೆ ತೆಗೆದೆವು ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ನಾವು ಸ್ಥಳದಲ್ಲಿ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರ ವ ವರದಿಯನ್ನು ತಯಾರು ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾವು ಎಲ್ಲಾ ದಾಖಲೆಗಳನ್ನು ಕಚೇರಿಯಲ್ಲಿ ಸೃಷ್ಠಿಸಿ ಇಲಾಖಾ ಅಂಕಿಅಂಶಗಳಿಗೋಸ್ಕರ ಮೇಲಾಧಿಕಾರಿಗಳ ಒತ್ತಡದ ಮೇರೆಗೆ ಆರೋಪಿಯ ವಿರುದ್ದ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೂ, ಮುದ್ದೆ ಮಾಲಿಗೂ ಮತ್ತು ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೆ.ಸರಿ ಅದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ**
**ಪ್ರ.ದ.ನ್ಯಾ.ದಂಡಾಧಿಕಾರಿಗಳು,**
**ಹೊಸದುರ್ಗ.**